# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1076(1042) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ವಿವೇಕಾನಂದ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.03.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಇಂಜಿನಿಯರಿಂಗ್ ಸೀಟ್‌ಗಳನ್ನು ಬ್ಲಾಕ್ ಮಾಡಿ ಅಕ್ರಮವೆಸಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ | ಬಿ.ಎಂ.ಎಸ್. ಇಂಜಿನಿಯರಿಂಗ್ ಕಾಲೇಜು ಮತ್ತು ನ್ಯೂ ಹಾರಿಜನ್ ಇಂಜಿನಿಯರಿಂಗ್ ಕಾಲೇಜುಗಳ ಆಡಳಿತ ಮಂಡಳಿಯವರು ಇಂಜಿನಿಯರಿಂಗ್ ಸೀಟುಗಳನ್ನು ಬ್ಲಾಕ್ ಮಾಡಿ ಮೆರಿಟ್ ವಿದ್ಯಾರ್ಥಿಗಳಿಗೆ ವಂಚಿಸಿರುವುದರ ಬಗ್ಗೆ ಸರ್ಕಾರವು ಯಾವ ಕ್ರಮವನ್ನು ತೆಗೆದುಕೊಂಡಿದೆ?(ಇದರ ಬಗ್ಗೆ ಮಾಹಿತಿ ನೀಡುವುದು) | 2024ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಇಂಜಿನಿಯರಿಂಗ್ ಸೀಟು ಪಡೆದು ಕಾಲೇಜಿಗೆ ಪ್ರವೇಶ ಪಡೆಯದೆ ಇರುವ ಅಭ್ಯರ್ಥಿಗಳಿಗೆ ಕಾರಣ ಕೇಳಿ ನೋಟೀಸ್‌ನ್ನು ನೀಡಿದ್ದು, ಆ ಬಗ್ಗೆ ಕೆಲವು ಅಭ್ಯರ್ಥಿಗಳು ತಾವುಗಳು ಸೀಟು ಹಂಚಿಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿಲ್ಲವೆಂದು ಹಾಗೂ ಆಪ್ಷನ್ ಎಂಟ್ರಿ ಮಾಡಿಲ್ಲವೆಂದು ಪ್ರಾಧಿಕಾರಕ್ಕೆ ಉತ್ತರ ನೀಡಿರುತ್ತಾರೆ. ಇಂತಹ ಹೆಚ್ಚಿನ ಪ್ರಕರಣಗಳಲ್ಲಿ B.M.S. Engineering College ಮತ್ತು New Horizon Engineering ಕಾಲೇಜುಗಳು ಆಪ್ಷನ್ ಎಂಟ್ರಿಯಲ್ಲಿ ಕಾಣಿಸಿದ್ದು, ಮತ್ತು ಆ ಸೀಟುಗಳು ಭರ್ತಿಯಾಗದೆ ಕಾಲೇಜಿಗೆ ಹಿಂತಿರುಗಿಸಿರುವುದರಿಂದ ಸೀಟ್ ಬ್ಲಾಕಿಂಗ್ ಬಗ್ಗೆ ಅನುಮಾನ ಬಂದಿರುತ್ತದೆ. ಹೀಗಾಗಿ ಈ ಕುರಿತು ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ತನಿಖೆ ನಡೆಸಲು ದೂರನ್ನು ಸಲ್ಲಿಸಲಾಗಿದೆ (ಪ್ರಥಮ ವರ್ತಮಾನದ ವರದಿ ಸಂಖ್ಯೆ:171/2024).<br><br>ಸೀಟ್ ಬ್ಲಾಕಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೂ ಒಟ್ಟು 09 ಜನರನ್ನು ಬಂಧಿಸಿರುವುದಾಗಿ ಮಲ್ಲೇಶ್ವರಂ ಪೊಲೀಸ್ ಠಾಣೆಯಿಂದ ವರದಿ ನೀಡಿರುತ್ತಾರೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಹೊರಗುತ್ತಿಗೆ ಸಿಬ್ಬಂದಿ |

| | | |
|---|---|---|
| | | ಶ್ರೀ ಅವಿನಾಶ ಎಂಬುವರು ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆಂದು ಪೊಲೀಸರು ಬಂಧಿಸಿದ್ದರಿಂದ ಇವರನ್ನು ದಿನಾಂಕ: 04.12.2024ರಂದು ಕೆಲಸದಿಂದ ತೆಗೆದು ಹಾಕಲಾಗಿದೆ.<br><br>ಪ್ರಕರಣವು ತನಿಖಾ ಹಂತದಲ್ಲಿ ಇರುವುದರಿಂದ ಅಂತಿಮ ವರದಿ ಬಂದ ನಂತರ ಆ ಬಗ್ಗೆ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. |

ಸಂ:ಇಡಿ 50 ಟಿಇಸಿ 2025

**(ಡಾ.ಎಂ.ಸಿ.ಸುಧಾಕರ್)**
**ಉನ್ನತ ಶಿಕ್ಷಣ ಸಚಿವರು**